# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 826(926) |
| ಸದಸ್ಯರ ಹೆಸರು | : | ಶ್ರೀ ಶಿವಕುಮಾರ್ ಕೆ<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 24.08.2026 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಮಧುಸೂದನ್ ನಾಯಕ್ ನೇತೃತ್ವದ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ; | ಶ್ರೀ ಮಧುಸೂದನ್ ಆರ್. ನಾಯಕ್ ರವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ಎಲ್ಲಾ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ. ಸದರಿ ಸಮೀಕ್ಷಾ ವರದಿ-2025ನ್ನು ದಿನಾಂಕ:27.05.2026 ರಂದು ಸ್ವೀಕೃತವಾಗಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಆದೇಶದನ್ವಯ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ- 2025ರ ದತ್ತಾಂಶಗಳ ಗೌಪ್ಯತೆಯನ್ನು ಕಾಪಾಡಬೇಕಾಗಿದ್ದು ಅದರಂತೆ ಕ್ರಮ ವಹಿಸಲಾಗಿದೆ. |
| ಆ) | ಈ ವರದಿಯನ್ನು ಸಾರ್ವಜನಿಕರ ಗಮನಕ್ಕೆ ತರಲಾಗಿದೆಯೇ: ಹಾಗೂ ಸಲ್ಲಿಕೆಯಾಗಿರುವ ವರದಿಯಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಶಿಫಾರಸ್ಸುಗಳನ್ನು ಜಾರಿ ಮಾಡಲು ಎಷ್ಟು ಕಾಲಮಿತಿ ಬೇಕು: | |
| ಇ) | ಈ ಹಿಂದೆ ಸಿ.ಎಸ್ ದ್ವಾರಕನಾಥ್ ಮತ್ತು ಪ್ರೋ ರವಿವರ್ಮಕುಮಾರ್ ಹಾಗೂ ಜಯಪ್ರಕಾಶ್ ಹೆಗಡೆ ಅವರು ಸಲ್ಲಿಸಿರುವ ವರದಿ ಮತ್ತು ಶಿಫಾರಸ್ಸುಗಳನ್ನು ಜಾರಿ ಮಾಡಲಾಗಿದೆಯೇ? | ಪ್ರೊ. ರವಿವರ್ಮ ಕುಮಾರ್ ರವರ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗವು ನೀಡಿದ ಶಿಫಾರಸ್ಸುಗಳನ್ವಯ ಪ್ರಸ್ತುತ ಇರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ:30.03.2002 ರ ಆದೇಶದಲ್ಲಿ ಹಿಂದುಳಿದ ವರ್ಗಗಳಿಗೆ ಭಾರತ ಸಂವಿಧಾನದ ಅನುಚ್ಛೇದ 15(4) ಮತ್ತು 16(4) ರಡಿ ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಮೀಸಲಾತಿಯನ್ನು ಕಲ್ಪಿಸಿ ಆದೇಶಿಸಲಾಗಿರುತ್ತದೆ.<br><br>ಡಾ॥ ಸಿ.ಎಸ್. ದ್ವಾರಕನಾಥ್ ರವರ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವ ಸಲಹೆ/ಶಿಫಾರಸ್ಸುಗಳ ವರದಿಗಳು ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| | | ಶ್ರೀ ಕೆ.ಜಯಪ್ರಕಾಶ ಹೆಗ್ಡೆ ರವರ ನೇತೃತ್ವದ ಆಯೋಗವು "ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2015ರ ದತ್ತಾಂಶಗಳ ಅಧ್ಯಯನ" ವರದಿಯು ದಿನಾಂಕ: 29.02.2024 ರಂದು ಸ್ವೀಕೃತವಾಗಿರುತ್ತದೆ. ಆದರೆ ಸದರಿ ವರದಿಯ ದತ್ತಾಂಶಗಳು 10 ವರ್ಷ ಹಳೆಯದಾಗಿರುವ ಕಾರಣ 2025ರಲ್ಲಿ ಹೊಸದಾಗಿ ಸಮೀಕ್ಷೆ ನಡೆಸಲು ತೀರ್ಮಾನಿಸಲಾಗಿರುತ್ತದೆ. |

ಸಂಖ್ಯೆ: ಹಿಂವಕ 277 ಬಿಸಿಎ 2026

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು